

# ದಿಗಂತ್ 'ಪೌಡರ್' ಮೋಡಿ

**ಕನ್ನಡ** ಸಿನಿಮಾರಂಗದಲ್ಲಿ ಕಾಮಿಡಿ ಜಾನರ್‌ಗೆ ಚೆನ್ನಾಗಿ ಒಗ್ಗುವ ನಟ ದಿಗಂತ್. ಬಾಡಿ ಲ್ಯಾಂಗ್ವೇಜ್, ಮಾತುಕತೆಯಲ್ಲಿ ತಮ್ಮದೇ ಹಾಸ್ಯದ ಮ್ಯಾನರಿಸಂಗೆ ಹೆಸರಾದವರು. ಇದೀಗ ಹಾಸ್ಯದ ಎಳೆಯನ್ನಿಟ್ಟುಕೊಂಡೇ ಪ್ರೇಕ್ಷಕರನ್ನು ಮತ್ತೆ ನಗಿಸಲು ಬರುತ್ತಿದ್ದಾರೆ.

ದಿಗಂತ್ ಮುಖ್ಯಭೂಮಿಕೆಯಲ್ಲಿ ನಟಿಸಿರುವ 'ಪೌಡರ್' ಸಿನಿಮಾ ಟೀಸರ್ ಈಚೆಗೆ ಬಿಡುಗಡೆ ಕಂಡಿದೆ. ಇಬ್ಬರು ಯುವಕರು ಒಂದು ನಿಗೂಢವಾದ 'ಪೌಡರ್' ಪ್ರಭಾವದಿಂದಾಗಿ ದಿಢೀರನೆ ಸಿರಿವಂತರಾಗಲು ಮಾಡುವ ಪ್ರಯತ್ನಗಳು, ಅವರಿಗೆ ಎದುರಾಗುವ ಸಮಸ್ಯೆಗಳೇ ಈ ಸಿನಿಮಾದ ಕಥೆ ಎಂದು ಹೇಳಿಕೊಂಡಿದೆ ಚಿತ್ರತಂಡ. ನಗುವಿನ ಜೊತೆ ಕುತೂಹಲವನ್ನೂ ಸಿನಿಮಾ ಕಟ್ಟಿಕೊಡಲಿದೆಯಂತೆ.

ದಿಗಂತ್ ನಾಯಕನಾಗಿ ನಟಿಸಿದ್ದು, ಶರ್ಮಿಳಾ ಮಾಂಡ್ರೆ, ಧನ್ಯಾ ರಾಮ್‌ಕುಮಾರ್ ಜೋಡಿಯಾಗಿದ್ದಾರೆ. ರಂಗಾಯಣ ರಘು, ನಾಗಭೂಷಣ್, ಗೋಪಾಲಕೃಷ್ಣ ದೇಶಪಾಂಡೆ ಮುಂತಾದವರು ತಾರಾಬಳಗದಲ್ಲಿದ್ದಾರೆ. ಜನಾರ್ದನ್ ಚಿಕ್ಕಣ್ಣ ನಿರ್ದೇಶಿಸಿರುವ ಈ ಚಿತ್ರದ ಚಿತ್ರೀಕರಣ ಕಳೆದ ಸೆಪ್ಟೆಂಬರ್‌ನಲ್ಲಿ ಆರಂಭವಾಗಿತ್ತು. ಸಿನಿಮಾ ಇದೇ ಜುಲೈ 12ರಂದು ತೆರೆಕಾಣಲು ಸಿದ್ಧತೆಗಳನ್ನು ನಡೆಸಲಾಗುತ್ತಿದೆ.

ಈಚೆಗೆ ದಿಗಂತ್ ಅಭಿನಯದ 'ದಿ ಜಡ್ಜ್‌ಮೆಂಟ್' ಸಿನಿಮಾ ಬಿಡುಗಡೆಯಾಗಿದೆ. 'ಉತ್ತರಕಾಂಡ' ಸಿನಿಮಾದಲ್ಲಿಯೂ ದಿಗಂತ್ ವಿಭಿನ್ನ ಗೆಟಪ್‌ನಲ್ಲಿ ಕಾಣಿಸಿಕೊಳ್ಳಲಿದ್ದಾರೆ.

# ತೆರೆಗೆ ರೆಡಿ 'ಬ್ಯಾಂಕ್ ಆಫ್ ಭಾಗ್ಯಲಕ್ಷ್ಮಿ'

'ಬ್ಲಿಂಕ್' ಸಿನಿಮಾದಿಂದ ಯಶಸ್ಸಿನ ಮೆಟ್ಟಿಲು ಏರಿರುವ ನಟ ದೀಕ್ಷಿತ್ ಶೆಟ್ಟಿ ಅಭಿನಯಿಸಿರುವ ಮತ್ತೊಂದು ಚಿತ್ರ ತೆರೆಗೆ ಬರಲು ರೆಡಿಯಾಗಿದೆ.



ದೀಕ್ಷಿತ್‌ಗೆ ನಟಿ ಬೃಂದಾ ಆಚಾರ್ಯ ಜೋಡಿಯಾಗಿ ನಟಿಸುತ್ತಿರುವ 'ಬ್ಯಾಂಕ್ of ಭಾಗ್ಯಲಕ್ಷ್ಮಿ', ಬ್ಯಾಂಕ್‌ವೊಂದನ್ನು ದರೋಡೆ ಮಾಡಲು ಹೊರಟವರ ಸುತ್ತ ಹೆಣೆಯಲಾದ ಹಾಸ್ಯ ಪ್ರಧಾನ ಕಥೆ. ಸಿನಿಮಾ ಚಿತ್ರೀಕರಣ ಮುಕ್ತಾಯದ ಹಂತ ತಲುಪಿದ್ದು, ತೆರೆಗೆ ತರುವ ಸಿದ್ಧತೆ ನಡೆಸಲಾಗುತ್ತಿದೆ. 'ಅವನೇ ಶ್ರೀಮನ್ನಾರಾಯಣ' ಸೇರಿದಂತೆ ಸಾಕಷ್ಟು ಚಿತ್ರಗಳಿಗೆ ವಿಎಫ್‌ಎಕ್ಸ್ ನೀಡಿರುವ ಅಭಿಷೇಕ ಎಂ. ಈ ಸಿನಿಮಾ ಮೂಲಕ ನಿರ್ದೇಶಕರಾಗಿ ಕಾಲಿಟ್ಟಿದ್ದಾರೆ.



ಬೆಂಗಳೂರು, ತುಮಕೂರು ಹಾಗೂ ಚಿತ್ರದುರ್ಗದ ಸುತ್ತ ಚಿತ್ರೀಕರಣ ಮಾಡಲಾಗಿದೆ. ಶೇ. 80ರಷ್ಟು ಚಿತ್ರೀಕರಣ ಮುಗಿದಿದೆ. ಶೀಘ್ರವೇ ಸಂಪೂರ್ಣ ಚಿತ್ರೀಕರಣ ಮುಗಿಸಲಾಗುವುದು. ಈ ವರ್ಷವೇ ಸಿನಿಮಾ ತೆರೆಗೆ ತರುವ ಆಲೋಚನೆಯಿರುವುದಾಗಿ ಚಿತ್ರತಂಡ ಹೇಳಿಕೊಂಡಿದೆ.

ಸಾಧುಕೋಕಿಲ, ಗೋಪಾಲಕೃಷ್ಣ ದೇಶಪಾಂಡೆ, ಉಷಾ ಭಂಡಾರಿ, ಅಶ್ವಿನ್ ರಾವ್ ಪಲ್ಲಕ್ಕಿ ಮುಂತಾದವರ ತಾರಾಗಣ ಚಿತ್ರದಲ್ಲಿದೆ. ಕನ್ನಡ ಹಾಗೂ ತೆಲುಗು ಭಾಷೆಯಲ್ಲಿ ಸಿನಿಮಾ ತೆರೆಗೆ ಬರಲಿದೆ ಎಂದು ತಂಡ ಹೇಳಿದೆ. 'ರಂಗಿ ತರಂಗ' ಸೇರಿದಂತೆ ಕೆಲವು ಚಿತ್ರಗಳನ್ನು ನಿರ್ಮಿಸಿದ್ದ ಎಚ್.ಕೆ. ಪ್ರಕಾಶ್ ಈ ಚಿತ್ರಕ್ಕೆ ಬಂಡವಾಳ ಹೂಡಿದ್ದಾರೆ.